ಸಂಖ್ಯೆ : ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2022 ದಿನಾಂಕ: 06-04-2022

**ಪತ್ರಿಕಾ ಪ್ರಕಟಣೆ – ಸಿಇಟಿ – 2022**

ಎ. ಸರ್ಕಾರದ ನಿರ್ದೇಶನದಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, ಮೊದಲನೇ ವರ್ಷದ / ಮೊದಲನೇ ಸೆಮಿಸ್ಟರ್ ನ ಇಂಜಿನಿಯರಿಂಗ್, ತಂತ್ರಜ್ಞಾನ, ಯೋಗ ಮತ್ತು ನ್ಯಾಚುರೋಪತಿ, ಕೃಷಿ ವಿಜ್ಞಾನ ಕೋರ್ಸುಗಳು ಅಂದರೆ – [ಬಿ.ವಿ.ಎಸ್‌ಸಿ & ಎ ಹೆಚ್ (ಪಶು ವೈದ್ಯಕೀಯ ಮತ್ತು ಪಶುಸಂಗೋಪನೆ), ಬಿ.ಎಸ್‌ಸಿ. (ಆನರ್ಸ್) ಕೃಷಿ, ಬಿ.ಎಸ್‌ಸಿ. (ಆನರ್ಸ್) ಅರಣ್ಯ ವಿಜ್ಞಾನ, ಬಿ.ಎಸ್‌ಸಿ. (ಆನರ್ಸ್) ರೇಷ್ಮೆಕೃಷಿ, ಬಿ.ಎಸ್‌ಸಿ. (ಆನರ್ಸ್) ತೋಟಗಾರಿಕೆ, ಬಿ.ಎಸ್‌ಸಿ. (ಆನರ್ಸ್) ಸಮುದಾಯ ವಿಜ್ಞಾನ, ಬಿ.ಟೆಕ್. (ಕೃಷಿ ಇಂಜಿನಿಯರಿಂಗ್), ಬಿ.ಟೆಕ್. (ಬಯೋಟೆಕ್ನಾಲಜಿ), ಬಿ.ಟೆಕ್. (ಹೈನುಗಾರಿಕೆ ತಂತ್ರಜ್ಞಾನ), ಬಿ.ಎಫ್.ಎಸ್‌ಸಿ. (ಮೀನುಗಾರಿಕೆ), ಬಿ.ಟೆಕ್. (ಆಹಾರ ತಂತ್ರಜ್ಞಾನ), ಬಿ.ಎಸ್‌ಸಿ. (ಆನರ್ಸ್) ಕೃಷಿ ವ್ಯವಹಾರ ನಿರ್ವಹಣೆ] ಮತ್ತು ಬಿ-ಫಾರ್ಮ & ಫಾರ್ಮಾ-ಡಿ ಕೋರ್ಸುಗಳ ಪ್ರವೇಶಕ್ಕಾಗಿ **2022 ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ-2022** ನ್ನು ಈ ಕೆಳಗಿನ ವೇಳಾಪಟ್ಟಿಯಂತೆ ನಡೆಸಲಿದೆ.

**ಸಾಮಾನ್ಯ ಪ್ರವೇಶ ಪರೀಕ್ಷೆ – 2022 ರ ವೇಳಾಪಟ್ಟಿ**

| ದಿನಾಂಕ | ದಿನ | ಸಮಯ | ವಿಷಯ | ಅಂಕಗಳು |
|---|---|---|---|---|
| **16-06-2022** | ಗುರುವಾರ | ಬೆಳಿಗ್ಗೆ 10.30 ರಿಂದ 11.50 ರ ವರೆಗೆ | ಜೀವಶಾಸ್ತ್ರ | 60 |
| | | ಮಧ್ಯಾಹ್ನ 02.30 ರಿಂದ 03.50 ರ ವರೆಗೆ | ಗಣಿತ | 60 |
| | | | | |
| **17-06-2022** | ಶುಕ್ರವಾರ | ಬೆಳಿಗ್ಗೆ 10.30 ರಿಂದ 11.50 ರ ವರೆಗೆ | ಭೌತಶಾಸ್ತ್ರ | 60 |
| | | ಮಧ್ಯಾಹ್ನ 02.30 ರಿಂದ 03.50 ರ ವರೆಗೆ | ರಸಾಯನ ಶಾಸ್ತ್ರ | 60 |

**ಕನ್ನಡ ಭಾಷಾ ಪರೀಕ್ಷೆ** (ಬೆಂಗಳೂರು, ಬೀದರ್, ಬಳ್ಳಾರಿ, ಬೆಳಗಾವಿ, ಮಂಗಳೂರು ಮತ್ತು ವಿಜಯಪುರ ಕೇಂದ್ರಗಳಲ್ಲಿ ಮಾತ್ರ)

| | | | | |
|---|---|---|---|---|
| **18-06-2022** | ಶನಿವಾರ | ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 12.30 ರ ವರೆಗೆ | ಹೊರನಾಡು ಹಾಗೂ ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ | 50 |

ಬಿ. ವೈದ್ಯಕೀಯ / ದಂತವೈದ್ಯಕೀಯ / ಆಯುಷ್ (ಆಯುರ್ವೇದ, ಯುನಾನಿ, ಹೋಮಿಯೋಪತಿ) ಕೋರ್ಸುಗಳಿಗೆ ಅಭ್ಯರ್ಥಿಗಳು ಎನ್‌ಟಿಎ ನವರು ನಡೆಸುವ ರಾಷ್ಟ್ರೀಯ ಅರ್ಹತಾ ಕಮ್ ಪ್ರವೇಶ ಪರೀಕ್ಷೆ-2022ಕ್ಕೆ (NEET- UG-2022) ಹಾಜರಾಗಬೇಕು.

ಸಿ. ಆರ್ಕಿಟೆಕ್ಚರ್ ಕೋರ್ಸ್‌ನ ಪ್ರವೇಶಕ್ಕಾಗಿ ಅಭ್ಯರ್ಥಿಗಳು ಕೌನ್ಸಿಲ್ ಆಫ್ ಆರ್ಕಿಟೆಕ್ಚರ್ ರವರು ನಡೆಸುವ NATA-2022 (National Aptitude Test in Architecture) ಪರೀಕ್ಷೆಗೆ ಹಾಜರಾಗಬೇಕು.

ಡಿ. ಸಾಮಾನ್ಯ ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕರ್ನಾಟಕ ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ನಿರ್ಧರಿಸುವ ಮೊದಲನೇ ಮತ್ತು ಎರಡನೇ ಪಿಯುಸಿ ಪಠ್ಯಕ್ರಮವನ್ನು ಅವಲಂಬಿಸಿರುತ್ತದೆ.

ಇ. ಸಿಇಟಿ-2022ಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ 12-04-2022 ರಿಂದ ಪ್ರಾರಂಭಿಸಲಾಗುತ್ತದೆ. ಯುಜಿಸಿಇಟಿ-2022 ರ ಮಾಹಿತಿ ಪುಸ್ತಕ ಮತ್ತು ಅರ್ಜಿ ಸಲ್ಲಿಸುವ ವಿಧಾನದ FAQ ಗಳನ್ನೂ ಸಹ ದಿನಾಂಕ 12-04-2022 ರಂದು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in